ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 13-11-2016

# ಪತ್ರಿಕಾ ಪ್ರಕಟಣೆ

## ಗ್ರಾಮೀಣ ಮಕ್ಕಳ ಪ್ರತಿಭೆ ಗುರುತಿಸಲು ಮಕ್ಕಳ ಹಬ್ಬ ಸಹಕಾರಿ: ಸಚಿವೆ ಉಮಾಶ್ರೀ

ಬೆಂಗಳೂರು, ನವೆಂಬರ್ 13 (ಕರ್ನಾಟಕ ವಾರ್ತೆ)

ಗ್ರಾಮೀಣ ಮಕ್ಕಳಲ್ಲಿ ಇರುವ ಸಾಂಸ್ಕೃತಿಕ ಕಲೆ ಹಾಗೂ ಸಾಹಿತ್ಯವನ್ನು ಹೊರತರಲು ಮಕ್ಕಳ ಹಬ್ಬ ಸಹಕಾರಿಯಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಉಮಾಶ್ರೀ ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇಂದು ನಗರದ ಕಬ್ಬನ್ ಉದ್ಯಾನವನದಲ್ಲಿ ಹಮ್ಮಿಕೊಂಡಿದ್ದ ಮಕ್ಕಳ ಹಬ್ಬ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಈ ಹಬ್ಬದಲ್ಲಿ ಮಕ್ಕಳು ಎರಡು ದಿನಗಳ ಕಾಲ ಇಂದಿನಿಂದ ವಿವಿಧ ಗ್ರಾಮೀಣ ಕಲೆಗಳನ್ನು ಪ್ರದರ್ಶಿಸಲಿದ್ದು, ರಾಜ್ಯದ ಅನೇಕ ಜಿಲ್ಲೆಗಳಿಂದ ಮಕ್ಕಳು ಭಾಗವಹಿಸಿದ್ದಾರೆ.

ಮಕ್ಕಳ ಸಾಂಸ್ಕೃತಿಕ ಪ್ರದರ್ಶನದ ಜೊತೆಯಲ್ಲಿ ಅವರ ಜ್ಞಾನ ಅಭಿವೃದ್ಧಿಗಾಗಿ ವೈಜ್ಞಾನಿಕ ಜಗತ್ತನ್ನು ಪರಿಚಯಿಸುವ ಸಲುವಾಗಿ ಎಚ್‌ಎಎಲ್, ಮೆಟ್ರೊ ಮತ್ತು ಜವಾಹರಲಾಲ ನೆಹರು ತಾರಾಲಯ ವಿಶೇಷ ಮಳಿಗೆಗಳನ್ನು ಸ್ಥಾಪಿಸಿದ್ದರು. ಮಕ್ಕಳ ಜೊತೆಯಲ್ಲಿ ಪೋಷಕರು ಸಹ ಭಾಗವಹಿಸಬಹುದಾಗಿದ್ದು ಎಲ್ಲರು ಭಾಗವಹಿಸುವಂತೆ ಸಚಿವರು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕರ್ನಾಟಕ ರಾಜ್ಯ ವಿಧಾನಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಎ ಹ್ಯಾರೀಸ್ ಇಂತಹ ಮಕ್ಕಳ ಹಬ್ಬ ಕಾರ್ಯಕ್ರಮಗಳು ಬೆಂಗಳೂರಿನಲ್ಲಿ ಅಷ್ಟೆ ಅಲ್ಲದೆ ಇತರೆ ಜಿಲ್ಲಾ ಕೇಂದ್ರಗಳಲ್ಲಿ ಹಮ್ಮಿಕೊಂಡಾಗ ಹೆಚ್ಚು ಮಕ್ಕಳಿಗೆ ಇದರ ಪ್ರಯೋಜನ ದೊರಕಲಿದೆ. ಮುಂದಿನ

ಪೀಳಿಗೆಯನ್ನು ಸದೃಢ ಮಾಡಲು ಇಂತಹ ಪ್ರಗತಿಪರ ಕಾರ್ಯಕ್ರಮಗಳು ಅವಶ್ಯಕ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ "ಅಂತಃಕರಣ" ಹಾಗೂ "ನನ್ನ ಕುರಿತು ನಾನೇ ಅರಿತಾಗ ಬಾಲ್ಯ ಸುಂದರ–ಯಶೋಗಾಥೆ" ಎಂಬ ಎರಡು ಪುಸ್ತಕಗಳ ಲೋಕಾರ್ಪಣೆ ಮಾಡಲಾಯಿತು ಹಾಗೂ ಗ್ರಾಮ್ ಸಂಸ್ಥೆ, ಯುನಿಸೆಫ್ ಹಾಗೂ ರಾಜ್ಯ ಸರಕಾರದ ಸಹಯೋಗದೊಂದಿಗೆ ಮೈಸೂರು ಜಿಲ್ಲೆಯ ನಂಜನಗೂಡು ತಾಲ್ಲೂಕು ಹಾಗೂ ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲ್ಲೂಕುಗಳ ಆಯ್ದ 20 ಗ್ರಾಮಗಳಲ್ಲಿ ಅನುಷ್ಠಾನಗೊಳ್ಳುತ್ತಿರುವ "ಸಂವರ್ಧನಾ" ಯೋಜನೆಗೆ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ]ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷೆ ಡಾ॥ ಕೃಪಾ ಅಮರ್ ಆಳ್ವ, ಧಾರವಾಡದ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷರಾದ ವೇದವ್ಯಾಸ ಆ.ಕೌಲಗಿ, ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಭಾರತಿ ಶಂಕರ್, ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಬಾಯಿ, ಬಾಲಭವನ ಸೊಸೈಟಿ ಅಧ್ಯಕ್ಷೆ ಡಾ॥ ಅಂಜಲಿ ನಿಂಬಾಳ್ಕರ್, ಜಾನಪದ ಅಕಾಡೆಮಿ ಅಧ್ಯಕ್ಷ ಪಿಚ್ಚಳ್ಳಿ ಶ್ರೀನಿವಾಸ್ ಸೇರಿದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಉಮಾ ಮಹಾದೇವನ್, ನಿರ್ದೇಶಕಿ ಎಂ. ದೀಪಾ ಇನ್ನಿತರರು ಭಾಗವಹಿಸಿದ್ದರು.

*********